National
Kannada
28.09.2025: 1310hrs
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಎಲ್ಲಾ ಕ್ಷೇತ್ರಗಳಲ್ಲಿ ನಾರಿ ಶಕ್ತಿಯ ಸಾಧನೆ: 'ಮನ್ ಕಿ ಬಾತ್'ನಲ್ಲಿ ಪ್ರಧಾನಿ ನರೇಂದ್ರ ಮೋದಿ

೨. ಕರೂರಿನಲ್ಲಿ ಕಾಲ್ತುಳಿತ: ಮೃತರ ಕುಟುಂಬಗಳಿಗೆ ಪ್ರಧಾನಿ, ತಮಿಳುನಾಡು ಸರ್ಕಾರ, ನಟ ವಿಜಯ್ ಪರಿಹಾರ ಘೋಷಣೆ

೩. ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಶಾಶ್ವತ ಸ್ಥಾನಕ್ಕಾಗಿ ಭಾರತದ ಪ್ರಯತ್ನಕ್ಕೆ ಬೆಂಬಲ ಪುನರುಚ್ಚರಿಸಿದ ರಷ್ಯಾ

೪. ಏಷ್ಯಾ ಕಪ್ ಟಿ-೨೦ ಕ್ರಿಕೆಟ್: ಫೈನಲ್ ಪಂದ್ಯದಲ್ಲಿಂದು ಭಾರತ-ಪಾಕಿಸ್ತಾನ ತಂಡಗಳ ನಡುವೆ ಸೆಣಸಾಟ

*******************

ನವರಾತ್ರಿಯ ಈ ಸಂದರ್ಭದಲ್ಲಿ, ಶಕ್ತಿಯನ್ನು ಪೂಜಿಸುತ್ತೇವೆ. ನಾರಿ ಶಕ್ತಿಯ ಉತ್ಸವವನ್ನು ಆಚರಿಸುತ್ತೇವೆ. ವ್ಯವಹಾರದಿಂದ ಕ್ರೀಡೆಯವರೆಗೆ, ಶಿಕ್ಷಣದಿಂದ ವಿಜ್ಞಾನದವರೆಗೆ, ದೇಶದ ಹೆಣ್ಣುಮಕ್ಕಳು ಎಲ್ಲಾ ಕ್ಷೇತ್ರಗಳಲ್ಲಿ ತಮ್ಮ ಸಾಧನೆಯನ್ನು ಮೆರೆಯುತ್ತಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್' ಕಾರ್ಯಕ್ರಮದ ೧೨೬ನೇ ಆವೃತ್ತಿಯಲ್ಲಿ ದೇಶ-ವಿದೇಶಗಳಲ್ಲಿರುವ ಭಾರತೀಯ ಸಮುದಾಯ ಉದ್ದೇಶಿಸಿ ಅವರು ತಮ್ಮ ಮನದ ಮಾತುಗಳನ್ನು ಹಂಚಿಕೊಂಡರು. ಎಂಟು ತಿಂಗಳು ಸಮುದ್ರದಲ್ಲಿ ನಿರಂತರವಾಗಿ ಹಾಯಿ ದೋಣಿಯಲ್ಲಿ, ಅದು ಕೂಡಾ ಸಮುದ್ರದಲ್ಲಿನ ಹವಾಮಾನವು ಯಾವುದೇ ಸಮಯದಲ್ಲಿ ಉಲ್ಬಣಿಸಬಹುದಾದ ಸ್ಥಿತಿಯಲ್ಲಿ ೫೦ ಸಾವಿರ ಕಿಲೋಮೀಟರ್‌ಗಳನ್ನು ಭಾರತೀಯ ನೌಕಾಪಡೆಯ ಇಬ್ಬರು ಧೈರ್ಯಶಾಲಿ ಅಧಿಕಾರಿಗಳು ಪ್ರಯಾಣಿಸಿದ್ದಾರೆ. ನಾವಿಕ ಸಾಗರ್ ಪರಿಭ್ರಮಣೆಯ ಸಂದರ್ಭದಲ್ಲಿ ಲೆಫ್ಟಿನೆಂಟ್ ಕಮಾಂಡರ್ ದಿಲ್ನಾ ಮತ್ತು ಲೆಫ್ಟಿನೆಂಟ್ ಕಮಾಂಡರ್ ರೂಪ ಇದನ್ನು ಸಾಧಿಸಿದ್ದಾರೆ. ಅವರು ಧೈರ್ಯ ಮತ್ತು ದೃಢಸಂಕಲ್ಪ ಏನೆಂಬುದನ್ನು ಪ್ರದರ್ಶಿಸಿದ್ದಾರೆ ಎಂದು ಪ್ರಧಾನಿ ಮೋದಿ ವಿವರಿಸಿದರು. ಇಂದು ಭಾರತದ ಇಬ್ಬರು ಮಹಾನ್

ವ್ಯಕ್ತಿಗಳಾದ ಹುತಾತ್ಮ ಭಗತ್ ಸಿಂಗ್ ಮತ್ತು ಗಾನ ಕೋಗಿಲೆ ಲತಾ ಮಂಗೇಶ್ಕರ್ ಜನ್ಮ ದಿನಾಚರಣೆ. ಹುತಾತ್ಮ ಭಗತ್ ಸಿಂಗ್ ಪ್ರತಿಯೊಬ್ಬ ಭಾರತೀಯರಿಗೂ, ವಿಶೇಷವಾಗಿ ದೇಶದ ಯುವಕರಿಗೆ ಸ್ಫೂರ್ತಿಯ ಸೆಲೆಯಾಗಿದ್ದಾರೆ. ಅವರ ಸ್ವಭಾವದಲ್ಲಿ ನಿರ್ಭಯತೆ ಆಳವಾಗಿ ಬೇರೂರಿತ್ತು ಎಂದು ಅವರು ಹೇಳಿದರು.  ಭಾರತೀಯ ಸಂಸ್ಕೃತಿ ಮತ್ತು ಸಂಗೀತದಲ್ಲಿ ಆಸಕ್ತಿ ಹೊಂದಿರುವ ಯಾರೇ ಆಗಲಿ ಲತಾ ಮಂಗೇಶ್ಕರ್ ಅವರ ಹಾಡುಗಳಿಂದ ಭಾವುಕರಾಗದೆ ಇರಲು ಸಾಧ್ಯವೇ ಇಲ್ಲ. ಅವರ ಹಾಡುಗಳು ಮಾನವನ ಭಾವನೆಗಳನ್ನು ಬಡಿದೆಬ್ಬಿಸುವಂತಿವೆ. ಅವರು ಹಾಡಿದ ದೇಶಭಕ್ತಿ ಗೀತೆಗಳು ಜನರಿಗೆ ಪ್ರೇರಣಾದಾಯಕವಾಗಿವೆ. ಅವರು ಭಾರತೀಯ ಸಂಸ್ಕೃತಿಯೊಂದಿಗೆ ಆಳವಾದ ಸಂಪರ್ಕ ಹೊಂದಿದ್ದರು ಎಂದು ಅವರು ಅಭಿಪ್ರಾಯಪಟ್ಟರು.  ಲತಾ ಮಂಗೇಶ್ಕರ್ ಅವರಿಗೆ ಸ್ಫೂರ್ತಿ ನೀಡಿದ ಮಹಾನ್ ವ್ಯಕ್ತಿಗಳಲ್ಲಿ ವೀರ್ ಸಾವರ್ಕರ್ ಕೂಡ ಒಬ್ಬರು. ಅವರನ್ನು ಅವರು ತಾತ್ಯಾ ಎಂದು ಕರೆಯುತ್ತಿದ್ದರು. ಅವರು ವೀರ್ ಸಾವರ್ಕರ್ ಅವರ ಅನೇಕ ಹಾಡುಗಳನ್ನು ಸಹ ಹಾಡಿದ್ದಾರೆ. ಲತಾ ದೀದಿ ಪ್ರತಿ ವರ್ಷ ತಪ್ಪದೇ ತಮಗೆ ರಾಖಿ ಕಳುಹಿಸುತ್ತಿದ್ದರು ಎಂದು ಪ್ರಧಾನಿ ಮೋದಿ ಸ್ಮರಿಸಿದರು.

ಧ್ವನಿ : ಪ್ರಧಾನಿ ನರೇಂದ್ರ ಮೋದಿ, ( 36 ಸೆಕೆಂಡುಗಳು)

ನಮ್ಮ ದೇಶವು ಕೆಲವೇ ದಿನಗಳ ಹಿಂದೆ ಮಹಾನ್ ವಿಚಾರವಾದಿ ಮತ್ತು ಚಿಂತಕ ಡಾ. ಎಸ್.ಎಲ್.ಭೈರಪ್ಪ ಅವರನ್ನು ಕಳೆದುಕೊಂಡಿತು. ಭೈರಪ್ಪ ಅವರೊಂದಿಗೆ ಹಲವಾರು ಸಂದರ್ಭಗಳಲ್ಲಿ ವಿವಿಧ ವಿಷಯಗಳ ಕುರಿತು ಗಂಭೀರ ಮಾತುಕತೆಗಳನ್ನು ನಡೆಸಿದ್ದೇನೆ. ಅವರ ಕೃತಿಗಳು ಯುವ ಪೀಳಿಗೆಯ ಚಿಂತನೆಗೆ ಮಾರ್ಗದರ್ಶನ ನೀಡುತ್ತಲೇ ಇರುತ್ತವೆ. ಅವರ ಅನೇಕ ಕನ್ನಡ ಕೃತಿಗಳ ಅನುವಾದ ಕೂಡ ಲಭ್ಯವಿದೆ. ನಮ್ಮ ಬೇರುಗಳು ಮತ್ತು ಸಂಸ್ಕೃತಿಯ ಬಗ್ಗೆ ಹೆಮ್ಮೆ ಪಡುವುದು ಎಷ್ಟು ಮುಖ್ಯ ಎಂಬುದನ್ನು ಅವರು ನಮಗೆ ಕಲಿಸಿದರು ಎಂದು ಅವರು ಅಭಿಪ್ರಾಯಪಟ್ಟರು.   ಈ ಬಾರಿಯ ವಿಜಯದಶಮಿ ಮತ್ತೊಂದು ಕಾರಣದಿಂದ ಬಹಳ ವಿಶೇಷವೆನಿಸುತ್ತದೆ. ಇದೇ ದಿನದಂದು ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಸಂಸ್ಥಾಪನೆಯ ನೂರನೇ ವರ್ಷವೂ ಆಗಿದೆ ಎಂದರು. ನೂರು ವರ್ಷಗಳ ಹಿಂದೆ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಸ್ಥಾಪನೆಯಾದಾಗ, ದೇಶ ಶತಮಾನಗಳ ಗುಲಾಮಗಿರಿಯ ಸರಪಣಿಯಲ್ಲಿ ಬಂಧಿಸಲ್ಪಟ್ಟಿತ್ತು. ಶತಮಾನಗಳ ಈ ಗುಲಾಮಗಿರಿಯು ನಮ್ಮ ಸ್ವಾಭಿಮಾನ ಮತ್ತು ಆತ್ಮವಿಶ್ವಾಸಕ್ಕೆ ಆಳವಾದ ಗಾಯವುಂಟು ಮಾಡಿತ್ತು. ವಿಶ್ವದ ಅತ್ಯಂತ ಪ್ರಾಚೀನ ನಾಗರಿಕತೆಯ ಮುಂದೆ ಸ್ವಯಂ ಗುರುತು ಇಲ್ಲದಂತಹ ಬಿಕ್ಕಟ್ಟಿನ ಪರಿಸ್ಥಿತಿ ಎದುರಾಗಿತ್ತು. ದೇಶವಾಸಿಗಳು ಕೀಳರಿಮೆಯ ಬಲಿಪಶುಗಳಾಗುತ್ತಿದ್ದರು. ಆದ್ದರಿಂದಲೇ ದೇಶದ ಸ್ವಾತಂತ್ರ್ಯದೊಂದಿಗೆ ಸೈದ್ಧಾಂತಿಕ ಗುಲಾಮಗಿರಿಯಿಂದಲೂ ಮುಕ್ತವಾಗುವುದು ಅಗತ್ಯವಾಗಿತ್ತು ಎಂದು ಪ್ರಧಾನಿ ಮೋದಿ ಹೇಳಿದರು.

ಇಂತಹ ಪರಿಸ್ಥಿತಿಯಲ್ಲಿ ಡಾ. ಹೆಗ್ಡೇವಾರ್ ಅವರು ಈ ವಿಷಯ ಕುರಿತು ಚಿಂತಿಸಲಾರಂಭಿಸಿದರು ಮತ್ತು ಈ ಭಗೀರಥ ಕಾರ್ಯಕ್ಕಾಗಿ ಅವರು ೧೯೨೫ ರಲ್ಲಿ ವಿಜಯದಶಮಿಯ ಪವಿತ್ರ ಸಂದರ್ಭದಲ್ಲಿ 'ರಾಷ್ಟ್ರೀಯ ಸ್ವಯಂ ಸೇವಕ್ ಸಂಘ' ಸ್ಥಾಪಿಸಿದರು. ಡಾಕ್ಟರ್ ಹೆಗ್ಡೇವಾರ್ ಅವರ ನಿಧನಾ ನಂತರ, ಗುರೂಜಿ ಅವರು ರಾಷ್ಟ್ರ ಸೇವೆಯ ಈ ಮಹಾಯಜ್ಞವನ್ನು ಮುನ್ನಡೆಸಿದರು ಎಂದು ಪ್ರಧಾನಿ ಮೋದಿ ವಿವರಿಸಿದರು.  ತ್ಯಾಗ ಮತ್ತು ಸೇವಾ ಭಾವನೆ ಹಾಗೂ ಶಿಸ್ತಿನ ಬೋಧನೆಯ ಸಂಘದ ನಿಜವಾದ ಶಕ್ತಿಯಾಗಿದೆ. ಇಂದು ಆರ್‌ಎಸ್‌ಎಸ್ ನೂರು ವರ್ಷಗಳಿಂದ ಅವಿಶ್ರಾಂತವಾಗಿ, ಅವಿರತವಾಗಿ ರಾಷ್ಟ್ರದ ಸೇವಾ ಕಾರ್ಯದಲ್ಲಿ ತೊಡಗಿಕೊಂಡಿದೆ. ಆದ್ದರಿಂದಲೇ ದೇಶದಲ್ಲಿ ಯಾವುದೇ ನೈಸರ್ಗಿಕ ವಿಕೋಪ ಎಲ್ಲಿಯೇ ಎದುರಾಗಲಿ, ಆರ್‌ಎಸ್‌ಎಸ್ ನ ಸ್ವಯಂ ಸೇವಕರು ಎಲ್ಲರಿಗಿಂತ ಮೊದಲು ಅಲ್ಲಿಗೆ ತಲುಪುತ್ತಾರೆ ಎಂಬುದನ್ನು ನಾವು ನೋಡುತ್ತೇವೆ.  ಲಕ್ಷಾಂತರ ಸ್ವಯಂ ಸೇವಕರ ಪ್ರತಿಯೊಂದು ಕೆಲಸ, ಪ್ರತಿಯೊಂದು ಪ್ರಯತ್ನವೂ ದೇಶ ಮೊದಲು ಎಂಬ ಭಾವನೆಯನ್ನು ಸದಾಕಾಲ ಅತ್ಯುತ್ತಮವಾಗಿರಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

*******************

ತಮಿಳುನಾಡಿನ ಕರೂರಿನಲ್ಲಿ ನಡೆದ ರಾಜಕೀಯ ರ‍್ಯಾಲಿಯಲ್ಲಿ ಸಂಭವಿಸಿದ ಕಾಲ್ತುಳಿತದಲ್ಲಿ ಸಾವನ್ನಪ್ಪಿದವರ ಸಂಖ್ಯೆ ೩೯ ಕ್ಕೆ ಏರಿದೆ. ವಿವಿಧ ಆಸ್ಪತ್ರೆಗಳಲ್ಲಿ ಗಾಯಗೊಂಡ ೫೦ ಕ್ಕೂ ಹೆಚ್ಚು ಜನರು ಚಿಕಿತ್ಸೆ ಪಡೆಯುತ್ತಿದ್ದಾರೆ. ಕಾಲ್ತುಳಿತದಲ್ಲಿ ಪ್ರಾಣ ಕಳೆದುಕೊಂಡವರ ಕುಟುಂಬಗಳಿಗೆ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಹತ್ತು ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ. ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿರುವವರಿಗೆ ಒಂದು ಲಕ್ಷ ರೂಪಾಯಿ ನೀಡಲಾಗುವುದು. ಘಟನೆಯ ತನಿಖೆಗಾಗಿ ನಿವೃತ್ತ ಹೈಕೋರ್ಟ್ ನ್ಯಾಯಮೂರ್ತಿ ಅರುಣಾ ಜಗದೀಶನ್ ನೇತೃತ್ವದ ಏಕ ಸದಸ್ಯರ ಆಯೋಗ ರಚಿಸಲಾಗಿದೆ ಎಂದು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ತಿಳಿಸಿದ್ದಾರೆ. ಜೀವಹಾನಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ದುಃಖ ವ್ಯಕ್ತಪಡಿಸಿದ್ದಾರೆ. ನಟ-ರಾಜಕಾರಣಿ ವಿಜಯ್ ಅವರ ತಮಿಳಗ ವೆಟ್ರಿ ಕಳಗಂ ಈ ರ‍್ಯಾಲಿಯನ್ನು ಆಯೋಜಿಸಿತ್ತು. ಘಟನೆ ಕುರಿತು ನಟ ವಿಜಯ್ ಆಘಾತ ವ್ಯಕ್ತಪಡಿಸಿದ್ದು, ಮೃತರ ಕುಟುಂಬಗಳಿಗೆ ತಲಾ ೨೦ ಲಕ್ಷ ರೂಪಾಯಿ ಪರಿಹಾರ ನೀಡುವುದಾಗಿ ತಿಳಿಸಿದ್ದಾರೆ. ಕರೂರ್ ಕಾಲ್ತುಳಿತದ ಬಗ್ಗೆ ವಿವರವಾದ ವರದಿಯನ್ನು ಸಲ್ಲಿಸುವಂತೆ ಕೇಂದ್ರ ಗೃಹ ಸಚಿವಾಲಯ, ತಮಿಳುನಾಡು ಸರ್ಕಾರಕ್ಕೆ ನಿರ್ದೇಶನ ನೀಡಿದೆ.

*******************

ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಮಂತ್ರದಿಂದ ಮಾರ್ಗದರ್ಶಿಸಲ್ಪಟ್ಟ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದ ಕೇಂದ್ರ ಸರ್ಕಾರ, ಪರಿವರ್ತನೆ ಮತ್ತು ಪ್ರಗತಿಯನ್ನು ತರಲು ಅವಿಶ್ರಾಂತವಾಗಿ ಶ್ರಮಿಸುತ್ತಿದೆ. ಇಂದು, ಈ ವಿಶೇಷ ಸರಣಿ - 'ಸೇವಾ ಪರ್ವ'ದಲ್ಲಿ ಕೇಂದ್ರ ಸರ್ಕಾರ, ಪ್ರಧಾನಮಂತ್ರಿ ಜನ ಧನ ಯೋಜನೆಯ ಮೂಲಕ ಆರ್ಥಿಕ ಸೇರ್ಪಡೆಯನ್ನು ಹೇಗೆ ಮುನ್ನಡೆಸಿದೆ, ಲಕ್ಷಾಂತರ ಮನೆಗಳಿಗೆ ಬ್ಯಾಂಕಿಂಗ್, ಉಳಿತಾಯಕ್ಕೆ ಪ್ರವೇಶವನ್ನು ಹೇಗೆ ನೀಡಿದೆ ಎಂಬುದರ ಕುರಿತು ವಿಶೇಷ ವರದಿ ಇದೀಗ ಮೂಡಿಬರಲಿದೆ.

ಧ್ವನಿ: ವಿಶೇಷ ವರದಿ- ಚೇತನ್ ( 40 ಸೆಕೆಂಡ್) ಸೇವಾ ಪರ್ವ- ವಿಶೇಷ ವರದಿ

ಕಳೆದ ದಶಕದಲ್ಲಿ ಆರ್ಥಿಕ ಸೇರ್ಪಡೆಯು ಭಾರತದ ಬೆಳವಣಿಗೆಯ ಮೂಲಾಧಾರವಾಗಿದೆ ಮತ್ತು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರಕ್ಕೆ ಪ್ರಮುಖ ಆದ್ಯತೆಯಾಗಿದೆ. ವಾಸ್ತವವಾಗಿ, ಪ್ರಧಾನಮಂತ್ರಿ ಜನ ಧನ ಯೋಜನೆಯು, ೨೦೧೪ರಲ್ಲಿ ಅಧಿಕಾರ ವಹಿಸಿಕೊಂಡ ನಂತರ ಪ್ರಧಾನಿ ಮೋದಿಯವರ ಆರಂಭಿಕ ಪ್ರಮುಖ ಉಪಕ್ರಮಗಳಲ್ಲಿ ಒಂದಾಗಿದೆ. ಇದು ಬ್ಯಾಂಕ್ ಖಾತೆಗಳನ್ನು ತೆರೆಯುವ ಬಗ್ಗೆ ಮಾತ್ರವಲ್ಲ, ಸಬಲೀಕರಣದ ಪ್ರಮುಖ ಸಾಧನವಾಗಿದೆ. ೫೬ ಕೋಟಿಗೂ ಹೆಚ್ಚು ಜನ್ ಧನ್ ಖಾತೆಗಳೊಂದಿಗೆ, ಈ ಯೋಜನೆಯು ವಿಶ್ವದ ಅತಿದೊಡ್ಡ ಹಣಕಾಸು ಸೇರ್ಪಡೆ ಉಪಕ್ರಮವಾಗಿ ಬೆಳೆದಿದೆ. ೬೭ ಪ್ರತಿಶತ ಖಾತೆಗಳು ಗ್ರಾಮೀಣ ಮತ್ತು ಅರೆ ನಗರ ಪ್ರದೇಶಗಳಲ್ಲಿವೆ. ಪ್ರತಿಯೊಂದು ಮನೆಗೂ ಸಾರ್ವತ್ರಿಕ ಬ್ಯಾಂಕಿಂಗ್ ಪ್ರವೇಶವನ್ನು ಒದಗಿಸುವ ಧ್ಯೇಯವು ನೇರ ಪ್ರಯೋಜನ ವರ್ಗಾವಣೆಗೆ ಅಡಿಪಾಯವಾಗಿದೆ ಮತ್ತು ಡಿಜಿಟಲ್ ಆರ್ಥಿಕತೆಯನ್ನು ಉತ್ತೇಜಿಸಲು ವೇಗವರ್ಧಕವಾಗಿದೆ.

******************

ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಶಾಶ್ವತ ಸ್ಥಾನಕ್ಕಾಗಿ ಭಾರತದ ಪ್ರಯತ್ನಕ್ಕೆ ರಷ್ಯಾ ತನ್ನ ಬೆಂಬಲವನ್ನು ಪುನರುಚ್ಚರಿಸಿದೆ. ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ೮೦ ನೇ ಅಧಿವೇಶನದಲ್ಲಿ, ರಷ್ಯಾ ವಿದೇಶಾಂಗ ಸಚಿವ ಸೆರ್ಗೆಯ್ ಲಾವ್ರೊವ್, ಪ್ರಸ್ತುತ ಜಾಗತಿಕ ಭೂದೃಶ್ಯವನ್ನು ಪ್ರತಿಬಿಂಬಿಸಲು ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಸುಧಾರಣೆಯ ಅಗತ್ಯವನ್ನು ಒತ್ತಿ ಹೇಳಿದರು. ಏಷ್ಯಾ, ಆಫ್ರಿಕಾ ಮತ್ತು ಲ್ಯಾಟಿನ್ ಅಮೆರಿಕದಿಂದ ಪ್ರಾತಿನಿಧ್ಯವನ್ನು ಹೆಚ್ಚಿಸಲು ಬ್ರೆಜಿಲ್ ಜೊತೆಗೆ ಶಾಶ್ವತ ಸ್ಥಾನಕ್ಕಾಗಿ ಭಾರತದ ಅರ್ಜಿಯನ್ನು ರಷ್ಯಾ ಬೆಂಬಲಿಸುತ್ತದೆ ಎಂದು ಅವರು ಹೇಳಿದರು.

******************

ಯುನೈಟೆಡ್ ಅರಬ್ ಎಮಿರೇಟ್ಸ್ ನಲ್ಲಿ ನಡೆಯುತ್ತಿರುವ ಏಷ್ಯಾ ಕಪ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ ಇಂದು ಭಾರತ ಮತ್ತು ಪಾಕಿಸ್ತಾನ ತಂಡಗಳು ಮುಖಾಮುಖಿಯಾಗಲಿವೆ.

*******************

ಕರ್ನಾಟಕದ ಕರಾವಳಿ ಹಾಗೂ ದಕ್ಷಿಣ ಒಳನಾಡು ಸೇರಿದಂತೆ ಮಧ್ಯಪ್ರದೇಶ, ಜಾರ್ಖಂಡ್, ಆಂಧ್ರಪ್ರದೇಶ, ತಮಿಳುನಾಡು, ಪುದುಚೇರಿ, ಪಶ್ಚಿಮಬಂಗಾಳ ಮತ್ತು ಸಿಕ್ಕಿಂಗಳಲ್ಲಿಯೂ ಇಂದು ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

*******************